ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೧

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆರಡನೆಯ ಅಧಿವೇಶನ

## ಸೋಮವಾರ, ದಿನಾಂಕ: ೨೧ನೇ ನವೆಂಬರ್, ೨೦೧೬

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು
೨. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು
೩. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು
೪. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು
೫. ವೈದ್ಯಕೀಯ ಶಿಕ್ಷಣ ಸಚಿವರು
೬. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು
೭. ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು

---

## ಹಿಂದುಳಿದ ವರ್ಗಗಳ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ಹಾಸ್ಟೆಲ್‌ಗಳಲ್ಲಿ ಆಹಾರ ಮತ್ತು ಅಗತ್ಯ ವಸ್ತುಗಳ ಪೂರೈಕೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧ (೧೦೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೩ರಿಂದ ಇಲ್ಲಿಯವರೆಗೂ ಹಿಂದುಳಿದ ವರ್ಗ ಹಾಗೂ ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡದ ಹಾಸ್ಟೆಲ್‌ಗಳಿಗೆ ಆಹಾರ ಹಾಗೂ ಅಗತ್ಯ ವಸ್ತುಗಳ ಪೂರೈಕೆಗೆ ತೆಗೆದುಕೊಂಡಿರುವ ಕ್ರಮ ಏನು ; (ವರ್ಷಾವಾರು ಮಾಹಿತಿ ನೀಡುವುದು)

(ಆ) ಸದರಿ ವಸ್ತುಗಳ ಪೂರೈಕೆಗಾಗಿ ವರ್ಷಾವಾರು ವಿವರ ನೀಡುವುದು ; ನಡೆಸಿರುವ ಟೆಂಡರ್‌ಗಳ ವಿವರ ನೀಡುವುದು ಹಾಗೂ ಸದರಿ ಟೆಂಡರ್‌ಗಳಲ್ಲಿ ಭಾಗವಹಿಸಿದ ಟೆಂಡರ್‌ದಾರರ ವಿವರ ನೀಡುವುದು ; ಯಾವ ಸಂಸ್ಥೆಗೆ/ ಯಾವ ವ್ಯಕ್ತಿಗೆ ಟೆಂಡರ್‌ಗಳನ್ನು ನೀಡಲಾಗಿದೆ ಹಾಗೂ ಟೆಂಡರ್‌ಗಳ ಒಟ್ಟು ಮೊತ್ತ ಎಷ್ಟು ? (ವರ್ಷಾವಾರು ಖರೀದಿಸಿದ ಪ್ರತಿ ವಸ್ತುಗಳ ವಿವರ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯಲ್ಲಿ ಹೊಸ ಪಡಿತರ ಚೀಟಿಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೨ (೮೭) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಹೊಸ ಪಡಿತರ ಚೀಟಿಗಾಗಿ ಎಷ್ಟು ಕುಟುಂಬಗಳಿಂದ ಅರ್ಜಿಗಳು ಸಲ್ಲಿಕೆಯಾಗಿವೆ ; (ಎ.ಪಿ.ಎಲ್. ಮತ್ತು ಬಿ.ಪಿ.ಎಲ್ ಕಾರ್ಡ್‌ಗಳ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಸಲ್ಲಿಕೆಯಾದ ಅರ್ಜಿಗಳಲ್ಲಿ ಎಷ್ಟು ಪಡಿತರ ಚೀಟಿಗಳನ್ನು ವಿತರಿಸಲಾಗಿದೆ ; (ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಕಾರ್ಡ್‌ಗಳ ವಿವರ ನೀಡುವುದು)

(ಇ) ಪಡಿತರ ಚೀಟಿ ವಿತರಣೆಯಲ್ಲಿ ಕಳೆದ ಮೂರು ವರ್ಷಗಳಿಂದಲೂ ವಿಳಂಬವಾಗಿರುವುದು ನಿಜವೇ ;

(ಈ) ಈ ರೀತಿ ವಿಳಂಬವಾಗಲು ಕಾರಣವೇನು ; ತ್ವರಿತಗೊಳಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ಭಿಕ್ಷಾಟನೆ ನಿರ್ಮೂಲನೆ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩ (೯೭) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಭಿಕ್ಷುಕರಿದ್ದಾರೆ ; ಭಿಕ್ಷಾಟನೆ ನಿಷೇಧ ಕಾಯ್ದೆ ಅಡಿ ಕಳೆದ ೨ ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ ; ಭಿಕ್ಷಾಟನೆ ನಿರ್ಮೂಲನೆ ಮಾಡುವಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಭಿಕ್ಷುಕರ ನಿಧಿ ಅಡಿ ಯಾವ ಯಾವ ಇಲಾಖೆಯಿಂದ ಎಷ್ಟು ತೆರಿಗೆ ಸಂಗ್ರಹವಾಗುತ್ತದೆ ; ಭಿಕ್ಷುಕರ ನಿಧಿ ಅಡಿ ಸದ್ಯ ಇರುವ ನಿಧಿಯ ಮೊತ್ತ ಎಷ್ಟು ; (ತಾಲ್ಲೂಕುವಾರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಭಿಕ್ಷುಕರ ನಿಧಿಯಡಿ ಭಿಕ್ಷುಕರಿಗಾಗಿ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; ಕಳೆದ ೨ ವರ್ಷಗಳಲ್ಲಿ ಈ ಯೋಜನೆಗಳಿಗೆ ಆದ ಖರ್ಚು ವೆಚ್ಚಗಳ ಸಂಪೂರ್ಣ ವಿವರ ನೀಡುವುದು ;

(ಈ) ಭಿಕ್ಷುಕರ ಪುನರ್ವಸತಿ ಕೇಂದ್ರಗಳು ಯಾವ ಯಾವ ಜಿಲ್ಲೆಗಳಲ್ಲಿವೆ ; ಸದ್ಯ ಸದರಿ ಪುನರ್ವಸತಿ ಕೇಂದ್ರಗಳಲ್ಲಿ ವಾಸಿಸುವ ಭಿಕ್ಷುಕರ ಸಂಖ್ಯೆ ಎಷ್ಟು ? (ಅವರ ಹೆಸರು ಮತ್ತು ವಿಳಾಸದೊಂದಿಗೆ ಪೂರ್ಣ ಮಾಹಿತಿ ಒದಗಿಸುವುದು)

**ಹೈದರಾಬಾದ್ – ಕರ್ನಾಟಕ ವ್ಯಾಪ್ತಿಯ ಪ್ರವಾಸೋದ್ಯಮ ತಾಣಗಳ ಬಗ್ಗೆ**

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) –**

೪ (೨೦೩) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದರಾಬಾದ್ ಕರ್ನಾಟಕದ ವ್ಯಾಪ್ತಿಯಲ್ಲಿ ಸರ್ಕಾರ ಗುರುತಿಸಿರುವ ಪ್ರವಾಸೋದ್ಯಮ ತಾಣಗಳು ಯಾವುವು ;

(ಆ) ಈ ಪ್ರವಾಸೋದ್ಯಮ ತಾಣಗಳಲ್ಲಿ ಪ್ರವಾಸಿಗರಿಗೆ ಇಲಾಖೆಯ ವತಿಯಿಂದ ಒದಗಿಸಲಾಗುತ್ತಿರುವ ಸೌಲಭ್ಯಗಳೇನು ;

(ಇ) ಈ ಪ್ರವಾಸೋದ್ಯಮ ತಾಣಗಳಲ್ಲಿ ಪ್ರವಾಸಿಗರಿಗೆ ಉಂಟಾಗಿರುವ ಕೊರತೆಗಳೇನು; ಅವುಗಳ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಪ್ರವಾಸೋದ್ಯಮ ಇಲಾಖೆಯು ಎದುರಿಸುತ್ತಿರುವ ಸಮಸ್ಯೆಗಳೇನು ; ಇವುಗಳ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

**ರಾಜೀವ್‌ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಜಮೀನಿನ ಬಗ್ಗೆ**

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೫ (೩೦) ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಮನಗರದ ಅರ್ಚಕರಹಳ್ಳಿಯಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಸ್ಥಾಪನೆಗಾಗಿ ಸರ್ಕಾರ ಮಂಜೂರು ಮಾಡಲಾದ ಜಮೀನಿನ ವಿಸ್ತೀರ್ಣವೆಷ್ಟು ;

(ಆ) ಇದರಲ್ಲಿ ಸರ್ವೋಚ್ಛ ನ್ಯಾಯಾಲಯದಲ್ಲಿ ವ್ಯಾಜ್ಯವಿರುವ ಭೂಮಿಯ ವಿಸ್ತೀರ್ಣ ಎಷ್ಟು ಹಾಗೂ ವ್ಯಾಜ್ಯವಿಲ್ಲದಿರುವ ಭೂಮಿಯ ವಿಸ್ತೀರ್ಣವೆಷ್ಟು ; (ವಿವರ ನೀಡುವುದು)

(ಇ) ಸರ್ವೋಚ್ಛ ನ್ಯಾಯಾಲಯದಲ್ಲಿ ವ್ಯಾಜ್ಯವಿರುವ ಭೂಮಿಯ ಕೆಲವು ಪ್ರಕರಣಗಳು ಇತ್ಯರ್ಥಗೊಂಡಿದ್ದರೂ ಸಹ ಕಾಮಗಾರಿ ಕೆಲಸಗಳು ವಿಳಂಬವಾಗಲು ಕಾರಣಗಳೇನು ;

(ಈ) ಪ್ರಸ್ತುತ ವೈದ್ಯಕೀಯ ಶಿಕ್ಷಣ ಇಲಾಖೆಯ ವಿಶ್ವವಿದ್ಯಾಲಯದ ಕ್ಯಾಂಪಸ್ ನಿರ್ಮಾಣ ಕಾಮಗಾರಿಗೆ ಸಚಿವ ಸಂಪುಟದ ಅನುಮೋದನೆ ದೊರೆತಿದೆಯೇ;

(ಉ) ಹಾಗಿದ್ದಲ್ಲಿ, ಕಾಮಗಾರಿ ಕೆಲಸಗಳನ್ನು ಯಾವಾಗ ಪ್ರಾರಂಭಿಸಲಾಗುವುದು ? (ಮಾಹಿತಿ ನೀಡುವುದು)

## ಪ್ರವಾಸೋದ್ಯಮ ಇಲಾಖೆಯಿಂದ ಎಸ್.ಸಿ.ಪಿ. ಮತ್ತು ಎಸ್.ಟಿ.ಪಿ.–ಗೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬ (೭೮) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಮೂರು ವರ್ಷಗಳಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಎಸ್.ಸಿ.ಪಿ. ಮತ್ತು ಎಸ್.ಟಿ.ಪಿ. ಯೋಜನೆಯಡಿ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಸರ್ಕಾರವು ಬಿಡುಗಡೆ ಮಾಡಿರುವ ಮೊತ್ತವೆಷ್ಟು ; (ವಿವರಗಳನ್ನು ನೀಡುವುದು)

(ಆ) ಈ ಯೋಜನೆಯಡಿ ಇದುವರೆವಿಗೂ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಇವುಗಳಲ್ಲಿ ಪೂರ್ಣವಾಗಿರುವ ಮತ್ತು ಅಪೂರ್ಣವಾಗಿರುವ ಕಾಮಗಾರಿಗಳಾವುವು ; (ವಿಧಾನಸಭಾ ಕ್ಷೇತ್ರಗಳವಾರು ವಿವರಗಳನ್ನು ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಗಳಡಿ ಕೈಗೆತ್ತಿಕೊಂಡಿರುವ ಕಾಮಗಾರಿಗಳು ಯಾವುವು ಮತ್ತು ವೆಚ್ಚ ಮಾಡಿರುವ ಮೊತ್ತವೆಷ್ಟು ? (ಕಾಮಗಾರಿಗಳ ಇತ್ತೀಚಿನ ಪ್ರಗತಿಯ ಬಗ್ಗೆ ವಿಧಾನಸಭಾ ಕ್ಷೇತ್ರಗಳವಾರು ಸಂಪೂರ್ಣ ವಿವರಗಳನ್ನು ನೀಡುವುದು)

## ವಿಜ್ಞಾನ ಕೇಂದ್ರಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭ (೮೯) ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಇರುವ ಒಟ್ಟು ವಿಜ್ಞಾನ ಕೇಂದ್ರಗಳು ಎಷ್ಟು ; ಸದರಿ ಕೇಂದ್ರಗಳ ಪೈಕಿ ಸ್ವಂತ ಕಟ್ಟಡವನ್ನು ಹೊಂದಿರುವ ಕೇಂದ್ರಗಳು ಎಷ್ಟು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ವಿಜ್ಞಾನ ಕೇಂದ್ರಗಳಿಗೆ ಸರ್ಕಾರದಿಂದ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಕಾರ್ಯಕ್ಕಾಗಿ ಬಳಸಿಕೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಚಿಕೂನ್‌ಗುನ್ಯಾ, ಡೆಂಗ್ಯೂ ಮತ್ತು ಹಕ್ಕಿಜ್ವರ ಹಾವಳಿ ಹೆಚ್ಚುತ್ತಿರುವ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೮ (೫೩+೫೬) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಚಿಕೂನ್‌ಗುನ್ಯಾ, ಡೆಂಗ್ಯೂ ಮತ್ತು ಹಕ್ಕಿಜ್ವರ ಹಾವಳಿ ಹೆಚ್ಚುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕಳೆದ ಮೂರು ವರ್ಷಗಳಲ್ಲಿ ಒಟ್ಟು ಎಷ್ಟು ಚಿಕೂನ್‌ಗುನ್ಯಾ, ಡೆಂಗ್ಯೂ ಮತ್ತು ಹಕ್ಕಿಜ್ವರದ ಪ್ರಕರಣಗಳು ದಾಖಲಾಗಿವೆ ; ಸಾವನ್ನಪ್ಪಿರುವ ಪ್ರಕರಣಗಳೆಷ್ಟು; ಸರ್ಕಾರ ಸದರಿ ಕುಟುಂಬಗಳಿಗೆ ನೀಡಿರುವ ಪರಿಹಾರವೇನು; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಮಳೆಗಾಲದ ನಂತರ ಕಡಿಮೆಯಾಗಬೇಕಾಗಿದ್ದ ಡೆಂಗ್ಯೂ ಹೆಚ್ಚಳಕ್ಕೆ ಆರೋಗ್ಯ ಇಲಾಖೆಯ ನಿರ್ಲಕ್ಷ್ಯವೇ ಕಾರಣವಲ್ಲವೇ ; ಹಾಗಿದ್ದಲ್ಲಿ, ಈ ರೋಗಗಳ ನಿಯಂತ್ರಣಕ್ಕೆ ಆರೋಗ್ಯ ಇಲಾಖೆಯಿಂದ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಇದಕ್ಕಾಗಿ ವಿನಿಯೋಗಿಸಿದ ಅನುದಾನವೆಷ್ಟು ; (ಜಿಲ್ಲಾವಾರು ಮೂರು ವರ್ಷಗಳ ವಿವರ ನೀಡುವುದು)

(ಉ) ಚಿಕ್ಕಮಗಳೂರು ಜಿಲ್ಲೆ ವ್ಯಾಪ್ತಿಯಲ್ಲಿ ಇಂಥ ಎಷ್ಟು ಪ್ರಕರಣಗಳು ದಾಖಲಾಗಿವೆ; (ಸಂಪೂರ್ಣ ಮಾಹಿತಿ ನೀಡುವುದು)

(ಊ) ಹಾವೇರಿ ಜಿಲ್ಲೆಯಲ್ಲಿನ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರ, ತಾಲ್ಲೂಕು ಜಿಲ್ಲಾ ಆಸ್ಪತ್ರೆಗಳಲ್ಲಿ ವೈದ್ಯರ ಹಾಗೂ ಸಿಬ್ಬಂದಿಗಳ ಕೊರತೆ ಹಾಗೂ ಮೂಲ ಸೌಕರ್ಯಗಳ ಕೊರತೆಯಿಂದ ಡೆಂಗ್ಯೂ ಸೇರಿದಂತೆ ಮಾರಕ ಕಾಯಿಲೆಗಳಿಗೆ ಚಿಕಿತ್ಸೆ ಇಲ್ಲದೆ ರೋಗಿಗಳು ತೊಂದರೆ ಅನುಭವಿಸುತ್ತಿರುವ ಬಗ್ಗೆ ಸರ್ಕಾರ ಯಾವ ಯಾವ ಕ್ರಮ ಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ಆರೋಗ್ಯ ಇಲಾಖೆಯಲ್ಲಿನ ಆಹಾರ ಸುರಕ್ಷತಾ ಕಾಯ್ದೆಯ ಅನುಷ್ಠಾನದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯ (೭೩) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಆರೋಗ್ಯ ಇಲಾಖೆಯಲ್ಲಿನ ಆಹಾರ ಸುರಕ್ಷತಾ ವಿಭಾಗಕ್ಕೆ ವೃಂದ ಮತ್ತು ನೇಮಕಾತಿ ಕರಡು ನಿಯಮಾವಳಿಗಳ ಸಂಬಂಧ ಯಾರು–ಯಾರು ಆಕ್ಷೇಪಣೆಗಳನ್ನು ದಾಖಲಿಸಿರುತ್ತಾರೆ ; ಶೇಕಡ ೧೦೦ರಷ್ಟು ಅಂದರೆ ಎಲ್ಲಾ ೩೬ ಅಂಕಿತ ಅಧಿಕಾರಿಗಳ ಹುದ್ದೆಗಳನ್ನು ಹಾಲಿ ಇರುವ ಆಹಾರ ಸುರಕ್ಷತಾ ಅಧಿಕಾರಿಗಳವರೆಗೆ ಪದನ್ನೋತಿ ನೀಡಿ ಭರ್ತಿಗೊಳಿಸಲು ಸರ್ಕಾರಕ್ಕಿರುವ ತೊಂದರೆ ಏನು ;

(ಆ) ವೃಂದ ಮತ್ತು ನೇಮಕಾತಿ ನಿಯಮಾವಳಿಗಳು ಅಂತಿಮಗೊಂಡು, ಆಹಾರ ಸುರಕ್ಷತಾ ಇಲಾಖೆ ರಚನೆಗೊಳ್ಳುವ ಮೊದಲೇ ಕಾನೂನಿಗೆ ವಿರುದ್ಧವಾಗಿ ಹಿರಿಯ ಆಹಾರ ಸುರಕ್ಷತಾ ಅಧಿಕಾರಿಗಳ ಹುದ್ದೆಗಳನ್ನು ಸೃಷ್ಟಿ ಮಾಡಿ

ಹೊರಡಿಸಿರುವ ಸರ್ಕಾರಿ ಆದೇಶಗಳನ್ನು ರದ್ದುಪಡಿಸಲಾಗುವುದೇ ; ಈ ಬಗ್ಗೆ ಯಾರು–ಯಾರು ದೂರುಗಳನ್ನು ದಾಖಲಿಸಿರುತ್ತಾರೆ ;

(ಇ) ಆಹಾರ ಸುರಕ್ಷತ ಇಲಾಖೆ ರಚನೆಗೊಂಡ ನಂತರ ಹೊಸದಾಗಿ ಆಹಾರ ಸುರಕ್ಷತಾ ಅಧಿಕಾರಿಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿ, ತದ ನಂತರ ಈ ಜೇಷ್ಠತಾ ಪಟ್ಟಿಯ ಆಧಾರದ ಮೇಲೆ ಖಾಯಂ ಅಂಕಿತ ಅಧಿಕಾರಿಗಳ ನೇಮಕವಾಗುವವರೆಗೆ ಹಾಲಿ ಇರುವ ಪ್ರಭಾರಿ ಅಂಕಿತ ಅಧಿಕಾರಿಗಳನ್ನೇ ಮುಂದುವರೆಸಲು ಸರ್ಕಾರಕ್ಕಿರುವ ತೊಂದರೆ ಏನು ;

(ಈ) ಆಹಾರ ಸುರಕ್ಷತಾ ಕಾಯಿದೆಯುನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಹ ನಿರ್ದೇಶಕರು (ವೈದ್ಯರು) ಹುದ್ದೆಯನ್ನು, ವೃಂದ ಮತ್ತು ನೇಮಕಾತಿ ನಿಯಮಾವಳಿಗಳಲ್ಲಿ ಸೇರಿಸಿ ಅಂತಿಮ ಆದೇಶ ಹೊರಡಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು ?

## ಅಂಗನವಾಡಿ ಕಾರ್ಯಕರ್ತೆಯರಿಗೆ ಕಳಪೆ ಮಟ್ಟದ ಸೀರೆ ನೀಡಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೦ (೦೧) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು ;

(ಆ) ಈ ಸಾಲಿನಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ ಸರ್ಕಾರದಿಂದ ಸೀರೆ ನೀಡಿರುವುದು ನಿಜವೇ ;

(ಇ) ನೀಡಿರುವ ಸದರಿ ಸೀರೆಗಳು ಕಳಪೆ ಗುಣಮಟ್ಟವೆಂದು ಕಾರ್ಯಕರ್ತೆಯರಿಂದ ಆರೋಪ ಕೇಳಿಬಂದಿರುವುದು ಮತ್ತು ಈ ಕುರಿತು ತನಿಖೆ ನಡೆಸಬೇಕೆಂದು ರಾಜ್ಯ ಮಟ್ಟದಲ್ಲಿ ಪ್ರತಿಭಟನೆ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೆಳಗಾವಿ ಜಿಲ್ಲೆಯಲ್ಲಿ ಐಟಿ–ಬಿಟಿ ಪಾರ್ಕ್ ಸ್ಥಾಪಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧ (೭೦) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆಯಲ್ಲಿ ಮಾಹಿತಿ ತಂತ್ರಜ್ಞಾನ (ಐಟಿ–ಬಿಟಿ) ಕ್ಷೇತ್ರವನ್ನು ಬೆಳೆಸುವ ಉದ್ದೇಶದಿಂದ, ಸ್ಥಳ ಗುರುತಿಸಿ ಅಡಿಗಲ್ಲು ನೆರವೇರಿಸಿ ವರ್ಷಗಳು ಕಳೆದರೂ ಅಲ್ಲಿ ಯಾವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯ ಯಾವ ಸ್ಥಳದಲ್ಲಿ ಐಟಿ–ಬಿಟಿ ಪಾರ್ಕ್ ಸ್ಥಾಪಿಸಲು ಸ್ಥಳ ಕಾಯ್ದಿರಿಸಲಾಗಿದೆ ; ಎಷ್ಟು ಎಕರೆ ಸ್ಥಳ ಕಾಯ್ದಿರಿಸಲಾಗಿದೆ;

(ಇ) ಸದರಿ ಕಾಯ್ದಿರಿಸಿದ ಸ್ಥಳದಲ್ಲಿ ಅಡಿಗಲ್ಲು ನೆರವೇರಿಸಿ ಎಷ್ಟು ವರ್ಷಗಳಾಗಿವೆ; ಇಲ್ಲಿಯವರೆಗೆ ಸದರಿ ಸ್ಥಳದಲ್ಲಿ ಯಾವ ಯಾವ ಮೂಲಭೂತ ಸೌಕರ್ಯಗಳನ್ನು ಕೈಗೊಳ್ಳಲಾಗಿದೆ ;

(ಈ) ಇಲ್ಲಿ ಉದ್ಯಮಗಳನ್ನು ಸ್ಥಾಪಿಸಲು ಪ್ರಚಾರದ ಕೊರತೆ ಎದ್ದು ಕಾಣುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಉದ್ಯಮಗಳನ್ನು ಆಕರ್ಷಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ;

(ಉ) ಯಾವ ಕಾಲ ಮಿತಿಯಲ್ಲಿ ಮೂಲಭೂತ ಸೌಕರ್ಯವನ್ನು ಕಲ್ಪಿಸಲಾಗುವುದು?

## ಬೀದರ್ ಜಿಲ್ಲೆಯ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿ ಕೊರತೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೨ (೩೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿ ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಮತ್ತು ಇತರೆ ಸಿಬ್ಬಂದಿಗಳಿಲ್ಲದೆ ಸಾರ್ವಜನಿಕರಿಗೆ ಮುಖ್ಯವಾಗಿ ಗ್ರಾಮಾಂತರ ಪ್ರದೇಶದ ರೋಗಿಗಳಿಗೆ ತೀವ್ರ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದಲ್ಲಿ, ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಜಿಲ್ಲೆಯಲ್ಲಿ ಸರ್ಕಾರಿ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಗೆ ಸರಿಯಾದ ವ್ಯವಸ್ಥೆ ಇಲ್ಲದೆ ರೋಗಿಗಳು ಬೇರೆ ಆಸ್ಪತ್ರೆಗೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ನಿರ್ವಹಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಪಡಿತರ ವಿತರಣೆ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩ (೧೨) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಆರು ತಿಂಗಳಲ್ಲಿ ಪಡಿತರ ವಿತರಣೆಯ ಸಂಬಂಧ ಇಲಾಖೆಯಿಂದ ಹೊರಡಿಸಲಾದ ಮಾರ್ಗಸೂಚಿ ಮತ್ತು ಸುತ್ತೋಲೆಗಳು ಯಾವುವು ; (ವಿವರ ನೀಡುವುದು)

(ಆ) ಗ್ರಾಮ ಪಂಚಾಯಿತಿಗಳು ಪಡಿತರ ಚೀಟಿಯ ಅರ್ಜಿ ಸಲ್ಲಿಕೆ ಮತ್ತು ತಿದ್ದುಪಡಿಗೆ ಪಡೆಯುವ ಸೇವಾ ಶುಲ್ಕವನ್ನು ತಮ್ಮ ಆಡಳಿತ ವೆಚ್ಚಕ್ಕೆ ಭರಿಸಿಕೊಳ್ಳಲು ಸರ್ಕಾರದಿಂದ ಆದೇಶ ನೀಡಲಾಗಿದೆಯೇ ; ಹಾಗಿದ್ದಲ್ಲಿ, ಆದೇಶದ ಪ್ರತಿ ಒದಗಿಸುವುದು ; ಇಲ್ಲದಿದ್ದಲ್ಲಿ, ಕಾರಣವೇನು ;

(ಇ) ಹೊಸ ಪಡಿತರ ಚೀಟಿಗೆ ಅರ್ಜಿ ಸಲ್ಲಿಕೆ ಮತ್ತು ಪಡಿತರ ಚೀಟಿಯ ತಿದ್ದುಪಡಿಯನ್ನು ಸ್ಥಗಿತಪಡಿಸಿರುವುದು ನಿಜವೇ ; ಹಾಗಿದ್ದಲ್ಲಿ, ಕಾರಣವೇನು; ಈ ಪ್ರಕ್ರಿಯೆಯನ್ನು ಪುನಃ ಪ್ರಾರಂಭಿಸಲು ಸರ್ಕಾರ ನಿರ್ಧರಿಸಿದ ಕಾಲಮಿತಿ ಎಷ್ಟು ;

(ಈ) ಉಡುಪಿ ಜಿಲ್ಲೆಯಲ್ಲಿ ಪಡಿತರ ಕೂಪನ್ ವಿತರಣೆಗೆ ತೆರೆಯಲಾದ ಫ್ರಾಂಚೈಸಿಗಳ ಸಂಖ್ಯೆ ಎಷ್ಟು ಮತ್ತು ಯಾವುವು ; ಸರ್ವರ್ ಅತೀ ನಿಧಾನವಾಗಿರುವುದರಿಂದ, ಬಡ ಜನರು ದಿನವಿಡೀ ಕೇಂದ್ರದ ಎದುರು ಕಾಯುತ್ತಾ ನಿಲ್ಲಬೇಕಾದ ಪರಿಸ್ಥಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಹೊಸದಾಗಿ ಆಧಾರ್ ಕಾರ್ಡ್‌ನ್ನು ಪಡೆದ ಅರ್ಹ ಫಲಾನುಭವಿಗಳಿಗೆ ತಾಂತ್ರಿಕ ದೋಷದಿಂದ ಪಡಿತರ ಚೀಟಿಯೊಂದಿಗೆ ಆಧಾರ್ ಸಂಖ್ಯೆ ಹೊಂದಾಣಿಕೆ (Mapping) ಆಗದೇ ಇರುವುದರಿಂದ ಪಡಿತರದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ಪರ್ಯಾಯ ವ್ಯವಸ್ಥೆ ಕೈಗೊಂಡಿದ್ದಲ್ಲಿ, ವಿವರ ನೀಡುವುದು)

## ವಿದ್ಯಾರ್ಥಿ ವಸತಿ ನಿಲಯಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪ (೨೭) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಡ್ಯ ಜಿಲ್ಲೆಯಲ್ಲಿ ಹಿಂದುಳಿದ ಮತ್ತು ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿರುವ ವಿದ್ಯಾರ್ಥಿ ವಸತಿ ನಿಲಯಗಳ ಒಟ್ಟು ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ವಸತಿ ನಿಲಯಗಳು ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ;

(ಇ) ಸದರಿ ವಸತಿ ನಿಲಯಗಳಲ್ಲಿ ಅನೇಕ ವಸತಿ ನಿಲಯಗಳ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅವುಗಳ ಸಂಖ್ಯೆ ಎಷ್ಟು ;

(ಈ) ಈ ವಸತಿ ನಿಲಯಗಳ ದುರಸ್ಥಿ ಕಾರ್ಯ ಕೈಗೊಂಡಿದ್ದಲ್ಲಿ, ಸರ್ಕಾರದಿಂದ ಇದಕ್ಕೆ ಖರ್ಚಾದ ಮೊತ್ತವೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದಲ್ಲಿರುವ ಡಯಾಲಿಸಿಸ್ ಕೇಂದ್ರಗಳ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೫ (೬೦+೯೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಒಟ್ಟು ಡಯಾಲಿಸಿಸ್ ಕೇಂದ್ರಗಳು ಎಷ್ಟು ; ಇನ್ನು ಎಷ್ಟು ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಯಂತ್ರಗಳ ಅವಶ್ಯಕತೆ ಇದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದೀಚೆಗೆ ಸರ್ಕಾರದ ವತಿಯಿಂದ ಎಷ್ಟು ಹೊಸ ಡಯಾಲಿಸಿಸ್ ಕೇಂದ್ರಗಳನ್ನು ಸಾರ್ವಜನಿಕರಿಗೆ ಒದಗಿಸಲಾಗಿದೆ ;

(ಇ) ಪ್ರತಿ ಡಯಾಲಿಸಿಸ್ ಕೇಂದ್ರವನ್ನು ತೆರೆಯಲು ಆಗುವ ವೆಚ್ಚ ಎಷ್ಟು ; (ವಿವರ ನೀಡುವುದು) ಈ ಚಿಕಿತ್ಸೆಗಾಗಿ ರೋಗಿಗಳಿಗೆ ಶುಲ್ಕ ವಿಧಿಸಲಾಗುತ್ತಿದೆಯೇ ; ಹಾಗಿದ್ದಲ್ಲಿ, ಯಾವ ಆಧಾರದಲ್ಲಿ ಶುಲ್ಕ ವಿಧಿಸಲಾಗುತ್ತಿದೆ ; (ಶುಲ್ಕದ ವಿವರ ನೀಡುವುದು)

(ಈ) ರಾಜ್ಯದಲ್ಲಿ ವರ್ಷವೊಂದಕ್ಕೆ ಡಯಾಲಿಸಿಸ್ ಚಿಕಿತ್ಸೆಗೊಳಪಡುತ್ತಿರುವವರ ಒಟ್ಟು ಸಂಖ್ಯೆ ಎಷ್ಟು ; ಇದರಿಂದ ಸರ್ಕಾರಕ್ಕೆ ತಗಲುವ ವೆಚ್ಚ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಉ) ಈಗಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಎಷ್ಟು ಡಯಾಲಿಸಿಸ್ ಯಂತ್ರಗಳು ಕಾರ್ಯನಿರ್ವಹಿಸುತ್ತಿಲ್ಲ ;

(ಊ) ಮಂಗಳೂರು ಜಿಲ್ಲಾ ಆಸ್ಪತ್ರೆಯಲ್ಲಿ ಎಷ್ಟು ಡಯಾಲಿಸಿಸ್ ಯಂತ್ರಗಳಿವೆ ; ಅವುಗಳಲ್ಲಿ ಎಷ್ಟು ಯಂತ್ರಗಳು ಕಾರ್ಯನಿರ್ವಹಿಸುತ್ತಿವೆ ; ದುರಸ್ಥಿಯಾಗದೆ ಬಾಕಿ ಉಳಿದಿರುವ ಯಂತ್ರಗಳೆಷ್ಟು ; ಹೆಚ್ಚುವರಿ ಯಂತ್ರಗಳನ್ನು ಪೂರೈಸಲು ತೆಗೆದುಕೊಂಡ ಕ್ರಮ ಹಾಗೂ ಯಾವಾಗ ಪೂರೈಸಲಾಗುವುದು ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾ.ಸೂ. 719, ಪ್ರತಿಗಳು 1500